# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 6,022 ಗ್ರಾಮ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು 2,000 ರೂ.ಗಳಿಂದ 3,000 ರೂ.ಗಳಿಗೆ ಹಾಗೂ 176 ಬಹುವಿಧ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು 5,000 ರೂ.ಗಳಿಂದ 6,000 ರೂ.ಗಳಿಗೆ ಹೆಚ್ಚಿಸಲಾಗುವುದು. 613 ನಗರ ಪುನರ್ವಸತಿ ಕಾರ್ಯಕರ್ತರನ್ನು ಮಾಸಿಕ 3,000 ರೂ.ಗಳ ಗೌರವಧನದೊಂದಿಗೆ ನೇಮಕ ಮಾಡಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆರವರ ಏಕಕಡತ ಸಂಖ್ಯೆ: ಇಸಿ/ಸಿ.2/ಯೋಜನೆ/ಗ್ರಾ.ಪು.ಯೋ/02/2017-18
2. ಸರ್ಕಾರದ ಆದೇಶ ಸಂಖ್ಯೆ:ಮಮಇ 237 ಪಿಹೆಚ್‌ಪಿ 2007, ದಿ:16.08.2007
3. ಸರ್ಕಾರದ ಆದೇಶ ಸಂಖ್ಯೆ:ಮಮಇ 150 ಪಿಹೆಚ್‌ಪಿ 2012, ದಿ:20.12.2012

**ಪ್ರಸ್ತಾವನೆ:**

2017-18ನೇ ಸಾಲಿನ ಆಯವ್ಯಯ ಭಾಷಣದ ಕ್ರಮ ಸಂಖ್ಯೆ: 158 (2)ನೇ ಬಿಂದುವಿನಲ್ಲಿ 6,022 ಗ್ರಾಮ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು 2,000 ರೂ.ಗಳಿಂದ 3,000 ರೂ.ಗಳಿಗೆ ಹಾಗೂ 176 ಬಹುವಿಧ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು 5,000 ರೂ.ಗಳಿಂದ 6,000 ರೂ.ಗಳಿಗೆ ಹೆಚ್ಚಿಸಲಾಗುವುದು ಹಾಗೂ 613 ನಗರ ಪುನರ್ವಸತಿ ಕಾರ್ಯಕರ್ತರನ್ನು ಮಾಸಿಕ 3,000 ರೂ.ಗಳ ಗೌರವಧನದೊಂದಿಗೆ ನೇಮಕ ಮಾಡಲಾಗುವುದೆಂದು ಘೋಷಿಸಲಾಗಿದೆ. ಮೇಲೆ ಓದಲಾದ ಕ್ರ.ಸಂ. (2)ರ ಆದೇಶದಲ್ಲಿ ಎನ್‌ಪಿಆರ್‌ಪಿಡಿ ಯೋಜನೆಯನ್ನು ಪುನರ್‌ಪರಿಶೀಲಿಸಿ ಹೊಸ ಮಾರ್ಗಸೂಚಿಗಳೊಂದಿಗೆ ಅಂಗವಿಕಲರಿಗಾಗಿ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮ ಎಂಬ ಹೊಸ ಯೋಜನೆಯನ್ನು ಜಾರಿಗೊಳಿಸಿದನ್ವಯ ವಿಕಲಚೇತನರಿಗೆ ವಿಕಲಚೇತನರ ಮೂಲಕವೇ ಅವರ ವಾಸಿಸುವ ಸ್ಥಳದಲ್ಲಿಯೇ ಶೈಕ್ಷಣಿಕ, ಉದ್ಯೋಗ, ತರಬೇತಿ, ಆರ್ಥಿಕ ಪುನರ್ವಸತಿ ಮತ್ತು ಸಾಮಾಜಿಕ ಭದ್ರತೆ ಸೌಲಭ್ಯವನ್ನು ಕಲ್ಪಿಸುವ ದೃಷ್ಟಿಯಿಂದ ಅಂಗವಿಕಲರ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮೇಲೆ ಓದಲಾದ ಕ್ರ.ಸಂ.(3)ರ ಆದೇಶದನ್ವಯ ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಹಾಲಿ 5250 ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು, 176 ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರು ಕೆಲಸ ನಿರ್ವಹಿಸುತ್ತಿದ್ದು, ಇವರುಗಳಿಗೆ ಕ್ರಮವಾಗಿ ಮಾಸಿಕ ರೂ.2000/- ಹಾಗೂ ರೂ.5000/-ಗಳ ಗೌರವಧನವನ್ನು ಪಾವತಿಸಲಾಗುತ್ತಿದೆ.

ಆದರೆ ಸದರಿ ಮೊತ್ತದಿಂದ ಜೀವನ ಸಾಗಿಸುವುದು ಬಹಳ ಕಷ್ಟಕರವಾಗಿದ್ದು, ಇಂತಹ ಕಾರ್ಯಕರ್ತರುಗಳಿಗೆ ನೀಡುವ ಗೌರವಧನವನ್ನು ಹೆಚ್ಚಿಸುವ ಸಂಬಂಧ ಮಾನ್ಯ ಮುಖ್ಯಮಂತ್ರಿಯವರ 2017-18ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದಂತೆ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಮಹಾನಗರ ಪಾಲಿಕೆ, ನಗರ ಸಭೆ, ಪುರಸಭೆಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರನ್ನು ನೇಮಕ ಮಾಡಿಕೊಳ್ಳಲು ಈ ಕೆಳಕಂಡ ಆಯ್ಕೆ ಸಮಿತಿಯನ್ನು ರಚಿಸಬಹುದೆಂದು ತಿಳಿಸಿ, ಸದರಿ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ: 2235-02-101-0-53 ಯೋಜನೆ, 059 ಇತರೆ ವೆಚ್ಚ, 422 ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ 423 ಗಿರಿಜನ ಉಪಯೋಜನೆಗಳಡಿ ಒದಗಿಸಿಕೊಳ್ಳಲಾಗಿರುವ ರೂ. 2516.00 ಲಕ್ಷಗಳ ಆಯವ್ಯಯದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡುವಂತೆ ಮೇಲೆ ಓದಲಾದ ಕ್ರ.ಸಂ.(1)ರ ಏಕಕಡತದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಕೋರಿರುತ್ತಾರೆ.

..2

| I | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | |
|---|---|---|
| 1 | ವಲಯ ಜಂಟಿ ಆಯುಕ್ತರು | ಅಧ್ಯಕ್ಷರು |
| 2 | ಉಪ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಸದಸ್ಯರು |
| 3 | ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ | ಸದಸ್ಯರು |
| 4 | ಸಮಾಜ ಕಲ್ಯಾಣಾಧಿಕಾರಿಗಳು, ಬಿಬಿಎಂಪಿ, ಬೆಂಗಳೂರು | ಸದಸ್ಯರು |
| 5 | ವಲಯ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ | ಸದಸ್ಯರು |
| 6 | ಉಪನಿರ್ದೇಶಕರು, ಮಮಅಇ, ಬೆಂಗಳೂರು ನಗರ ಜಿಲ್ಲೆ | ಸದಸ್ಯರು |
| 7 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |

| II | ಮಂಗಳೂರು, ಬೆಳಗಾವಿ, ಮೈಸೂರು, ಹುಬ್ಬಳ್ಳಿ-ಧಾರವಾಡ, ಬಳ್ಳಾರಿ, ದಾವಣಗೆರೆ, ಕಲಬುರಗಿ | |
|---|---|---|
| 1 | ಆಯುಕ್ತರು | ಅಧ್ಯಕ್ಷರು |
| 2 | ಸಮಾಜ ಕಲ್ಯಾಣಾಧಿಕಾರಿಗಳು, ಮಹಾನಗರ ಪಾಲಿಕೆ | ಸದಸ್ಯರು |
| 3 | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4 | ಪಾಲಿಕೆಯ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ | ಸದಸ್ಯರು |
| 5 | ಮಮಅ ಇಲಾಖೆಯ ಆಯಾ ಜಿಲ್ಲೆಗಳ ಉಪ ನಿರ್ದೇಶಕರು | ಸದಸ್ಯರು |
| 6 | ಆಯಾ ಜಿಲ್ಲೆಗಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು | ಸದಸ್ಯ ಕಾರ್ಯದರ್ಶಿಗಳು |

| III | ನಗರ ಸಭೆ | |
|---|---|---|
| 1 | ಆಯುಕ್ತರು-ನಗರ ಸಭೆ | ಅಧ್ಯಕ್ಷರು |
| 2 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 3 | ಆರೋಗ್ಯಾಧಿಕಾರಿಗಳು-ನಗರ ಸಭೆ | ಸದಸ್ಯರು |
| 4 | ನಗರ ಸಭೆ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಓರ್ವ ಪ್ರತಿನಿಧಿ | ಸದಸ್ಯರು |
| 5 | ಉಪ ನಿರ್ದೇಶಕರು, ಮಮಅಇ, ಆಯಾ ಜಿಲ್ಲೆ | ಸದಸ್ಯರು |
| 6 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಆಯಾ ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |

| IV | ಪುರಸಭೆ | |
|---|---|---|
| 1 | ಮುಖ್ಯಾಧಿಕಾರಿಗಳು-ಪುರಸಭೆ | ಅಧ್ಯಕ್ಷರು |
| 2 | ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 3 | ಆರೋಗ್ಯಾಧಿಕಾರಿಗಳು-ಪುರಸಭೆ | ಸದಸ್ಯರು |
| 4 | ಪುರಸಭೆ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಓರ್ವ ಪ್ರತಿನಿಧಿ | ಸದಸ್ಯರು |
| 5 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಮಅಇ, ಆಯಾ ತಾಲ್ಲೂಕು | ಸದಸ್ಯರು |
| 6 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಆಯಾ ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |

..3

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 115 ಪಿಹೆಚ್‌ಪಿ 2017, ಬೆಂಗಳೂರು, ದಿನಾಂಕ:07.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2017-18ನೇ ಸಾಲಿನ ಆಯವ್ಯಯ ಭಾಷಣದ ಕ್ರಮ ಸಂಖ್ಯೆ: 158 (2)ನೇ ಬಿಂದುವಿನಲ್ಲಿ "6,022 ಗ್ರಾಮ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು 2,000 ರೂ.ಗಳಿಂದ 3,000 ರೂ.ಗಳಿಗೆ ಹಾಗೂ 176 ಬಹುವಿಧ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು 5,000 ರೂ.ಗಳಿಂದ 6,000 ರೂ.ಗಳಿಗೆ ಹೆಚ್ಚಿಸಲಾಗುವುದು ಹಾಗೂ 613 ನಗರ ಪುನರ್ವಸತಿ ಕಾರ್ಯಕರ್ತರನ್ನು ಮಾಸಿಕ 3,000 ರೂ.ಗಳ ಗೌರವಧನದೊಂದಿಗೆ ನೇಮಕ ಮಾಡಲಾಗುವುದು" ಎಂದು ಘೋಷಿಸಿದನ್ವಯ ಗ್ರಾಮ ಪುನರ್ವಸತಿ ಕಾರ್ಯಕರ್ತರ ಹಾಗೂ ಬಹುವಿಧ ಪುನರ್ವಸತಿ ಕಾರ್ಯಕರ್ತರ ಗೌರವಧನವನ್ನು ಹೆಚ್ಚಿಸುವ ಮತ್ತು ನಗರ ಪುನರ್ವಸತಿ ಕಾರ್ಯಕರ್ತರನ್ನು ಮಾಸಿಕ 3,000 ರೂ.ಗಳ ಗೌರವಧನದೊಂದಿಗೆ ನೇಮಕ ಮಾಡಿಕೊಳ್ಳಲು ಈ ಕೆಳಕಂಡ ಆಯ್ಕೆ ಸಮಿತಿಯನ್ನು ರಚಿಸಿ, ಸದರಿ ಯೋಜನೆಯನ್ನು ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಯೋಜನಾ ಮಾರ್ಗಸೂಚಿಗಳಿಗೊಳಪಟ್ಟು ನಿಯಮಾನುಸಾರವಾಗಿ ಮತ್ತು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

| I | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | |
|---|---|---|
| 1 | ವಲಯ ಜಂಟಿ ಆಯುಕ್ತರು | ಅಧ್ಯಕ್ಷರು |
| 2 | ಉಪ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಸದಸ್ಯರು |
| 3 | ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ | ಸದಸ್ಯರು |
| 4 | ಸಮಾಜ ಕಲ್ಯಾಣಾಧಿಕಾರಿಗಳು, ಬಿಬಿಎಂಪಿ, ಬೆಂಗಳೂರು | ಸದಸ್ಯರು |
| 5 | ವಲಯ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ | ಸದಸ್ಯರು |
| 6 | ಉಪನಿರ್ದೇಶಕರು, ಮಮಅಇ, ಬೆಂಗಳೂರು ನಗರ ಜಿಲ್ಲೆ | ಸದಸ್ಯರು |
| 7 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |

| II | **ಮಂಗಳೂರು, ಬೆಳಗಾವಿ, ಮೈಸೂರು, ಹುಬ್ಬಳ್ಳಿ-ಧಾರವಾಡ, ಬಳ್ಳಾರಿ, ದಾವಣಗೆರೆ, ಕಲಬುರಗಿ** | |
|---|---|---|
| 1 | ಆಯುಕ್ತರು | ಅಧ್ಯಕ್ಷರು |
| 2 | ಸಮಾಜ ಕಲ್ಯಾಣಾಧಿಕಾರಿಗಳು, ಮಹಾನಗರ ಪಾಲಿಕೆ | ಸದಸ್ಯರು |
| 3 | ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು | ಸದಸ್ಯರು |
| 4 | ಪಾಲಿಕೆಯ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ | ಸದಸ್ಯರು |
| 5 | ಮಮಅ ಇಲಾಖೆಯ ಆಯಾ ಜಿಲ್ಲೆಗಳ ಉಪ ನಿರ್ದೇಶಕರು | ಸದಸ್ಯರು |
| 6 | ಆಯಾ ಜಿಲ್ಲೆಗಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು | ಸದಸ್ಯ ಕಾರ್ಯದರ್ಶಿಗಳು |

| III | **ನಗರ ಸಭೆ** | |
|---|---|---|
| 1 | ಆಯುಕ್ತರು-ನಗರ ಸಭೆ | ಅಧ್ಯಕ್ಷರು |
| 2 | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 3 | ಆರೋಗ್ಯಾಧಿಕಾರಿಗಳು-ನಗರ ಸಭೆ | ಸದಸ್ಯರು |
| 4 | ನಗರ ಸಭೆ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಓರ್ವ ಪ್ರತಿನಿಧಿ | ಸದಸ್ಯರು |

| | | |
|---|---|---|
| 5 | ಉಪ ನಿರ್ದೇಶಕರು, ಮಮಅಇ, ಆಯಾ ಜಿಲ್ಲೆ | ಸದಸ್ಯರು |
| 6 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಆಯಾ ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |

| IV | ಪುರಸಭೆ | |
|---|---|---|
| 1 | ಮುಖ್ಯಾಧಿಕಾರಿಗಳು-ಪುರಸಭೆ | ಅಧ್ಯಕ್ಷರು |
| 2 | ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | ಸದಸ್ಯರು |
| 3 | ಆರೋಗ್ಯಾಧಿಕಾರಿಗಳು-ಪುರಸಭೆ | ಸದಸ್ಯರು |
| 4 | ಪುರಸಭೆ ವ್ಯಾಪ್ತಿಯ ಪ್ರತಿಷ್ಠಿತ ವಿಕಲಚೇತನ ಸ್ವಯಂ ಸೇವಾ ಸಂಸ್ಥೆಯ ಓರ್ವ ಪ್ರತಿನಿದಿ | ಸದಸ್ಯರು |
| 5 | ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಮಅಇ, ಆಯಾ ತಾಲ್ಲೂಕು | ಸದಸ್ಯರು |
| 6 | ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಆಯಾ ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |

ಈ ವೆಚ್ಚವನ್ನು 2017-18ನೇ ಸಾಲಿನ ಲೆಕ್ಕ ಶೀರ್ಷಿಕೆ: 2235-02-101-0-53 ಯೋಜನೆ ಉಪ ಲೆಕ್ಕಶೀರ್ಷಿಕೆ-059 ಇತರೆ ವೆಚ್ಚ, 422 ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ 423 ಗಿರಿಜನ ಉಪಯೋಜನೆಗಳಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 271 ವೆಚ್ಚ-10/2017, ದಿ:18.05.2017 ಮತ್ತು ಪಿಡಿ 102 ಐಎಂಎಂ 2017, ದಿ:19.05.2017ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

7/6/2017
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
6. ಆಯುಕ್ತರು, ರಾಜ್ಯ ಅಂಗವಿಕಲ ವ್ಯಕ್ತಿಗಳ ಅಧಿನಿಯಮದ ಕಛೇರಿ ಕರ್ನಾಟಕ, ನಂ.55, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಕಟ್ಟಡ, ಅಭಯ ಸಂಕೀರ್ಣ, 2ನೇ ಮಹಡಿ, ರಿಸಲ್ದಾರ್ ರಸ್ತೆ, ಶೇಷಾದ್ರಿ ಪುರಂ, ಬೆಂಗಳೂರು.
7. ಅಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ(2&10), ವಿಧಾನ ಸೌಧ, ಬೆಂಗಳೂರು
9. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
12. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ ಒಡಿಜಿಸಿ/ ಹೆಚ್ಚುವರಿ ಪ್ರತಿಗಳು.